**<u>ಅಸಲು ದಾವಾ ಸಂಖ್ಯೆ - 151/2015</u>** **ಪಿ.ಡಬ್ಲ್ಯೂ:-1**

ದಿನಾಂಕಃ **08-02-2024** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲು :- 2 ನೇ ಪ್ರತಿವಾದಿ ಪರ ವಕೀಲರಿಂದ :-</u>**

ನಾನು ಪಿ.ಯು.ಸಿ ವರೆಗೂ ವಿದ್ಯಾಭ್ಯಾಸ ಮಾಡಿರುತ್ತೇನೆ. ನಾನು ಈಗ ಕೂಲಿ ಕೆಲಸವನ್ನು ಮಾಡುತ್ತಿದ್ದೇನೆ. ಪ್ರತಿವಾದಿಗಳು ನನಗೆ ಗೊತ್ತು. 2 ನೇ ಪ್ರತಿವಾದಿ ಈಗ ಮೃತರಾಗಿರುತ್ತಾರೆ. 2 ನೇ ಪ್ರತಿವಾದಿಗೆ ವಾರಸುದಾರರು ಇದ್ದರೆ ಎಂದರೆ ಸರಿ. ಈ ದಾವೆಯನ್ನು ಪ್ರತಿವಾದಿಗಳ ವಿರುದ್ಧ ನಮ್ಮ ಆಸ್ತಿಯನ್ನು ಲಪಟಾಯಿಸುತ್ತಾರೆ ಎನ್ನುವ ಉದ್ದೇಶದಿಂದ ಸಲ್ಲಿಸಿದ್ದೇವೆ . ದಾವಾ ಆಸ್ತಿಯ ಸ್ವತ್ತಿನ ನಂ.97 ವಿಸ್ತೀರ್ಣ 22 X 110. ದಾವಾ ಆಸ್ತಿಯು ಈಗ ನನ್ನ ತಾಯಿಯ ಹೆಸರಿನಲ್ಲಿ ಇರುತ್ತದೆ. ಈಗ ನನ್ನ ತಾಯಿ ಮೃತರಾಗಿರುತ್ತಾರೆ. ನನ್ನ ತಾಯಿಯ ಮರಣವಾದ ನಂತರ ದಾವಾ ಆಸ್ತಿಯನ್ನು ನಮ್ಮ ಹೆಸರಿಗೆ ಬದಲಾಯಿಸಿಕೊಡುವಂತೆ ಸಂಬಂಧಪಟ್ಟ ಪ್ರಾಧಿಕಾರಕ್ಕೆ ಅರ್ಜಿಯನ್ನು ಸಲ್ಲಿಸಿರುತ್ತೇನೆ. ಸದರಿ ಅರ್ಜಿಯನ್ನು ಈ ದಾವೆಯಲ್ಲಿ ಹಾಜರುಪಡಿಸಿಲ್ಲ ಎಂದರೆ ಸರಿ. ದಾವಾ ಆಸ್ತಿಯಲ್ಲಿ ನನಗೆ ಯಾವುದೇ ಹಕ್ಕು ಹಿತ್ತಾಸಕ್ತಿ ಇಲ್ಲದೇ ಇದ್ದ ಕಾರಣ ನಾನು ಸಂಬಂಧಪಟ್ಟ ಇಲಾಖೆಗೆ ಅರ್ಜಿಯನ್ನು ಸಲ್ಲಿಸಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನನಗೆ ಯಾವುದೇ ಹಕ್ಕು ಹಿತ್ತಾಸಕ್ತಿ ಇಲ್ಲದೇ ಇದ್ದರೂ ಸಹ ಪ್ರತಿವಾದಿಗಳಿಗೆ ವಿನಃ ಕಾರಣ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.